ಕರ್ನಾಟಕ ಪರೀಕ್ಷಾ ಪ್ರಾಧಿಕಾರ

Karnataka Examinations Authority

ಸಂಖ್ಯೆ: ಇಡಿ/ಕೆಇಎ/ಪಿಜಿಸಿಇಟಿ/2020 ದಿನಾಂಕ: 04-01-2021

## ಪ್ರಕಟಣೆ

### ಪಿಜಿಸಿಇಟಿ-2020 - ಎರಡನೇ ಹಾಗು ಕೊನೆಯ ಸುತ್ತಿನ ಸೀಟು ಹಂಚಿಕೆ ಸೂಚನೆಗಳು

ಎರಡನೇ ಹಾಗು ಕೊನೆಯ ಸುತ್ತಿನಲ್ಲಿ ಸೀಟು ಹಂಚಿಕೆಯ ನಂತರ ಸೀಟು ಹಂಚಿಕೆಯಾದ ಅಭ್ಯರ್ಥಿಗಳಿಗೆ ಯಾವುದೇ ಛಾಯ್ಸ್‌ಗಳನ್ನು ನೀಡಲಾಗುವುದಿಲ್ಲ. ಅಭ್ಯರ್ಥಿಗಳು ದಾಖಲಿಸುವ ಇಚ್ಛೆ / ಆಯ್ಕೆಗಳನ್ನು ಪರಿಗಣಿಸಿ ಮೆರಿಟ್ ಆಧಾರದ ಮೇಲೆ ಸೀಟು ಹಂಚಿಕೆಯನ್ನು ಮಾಡುವುದರಿಂದ, ಅಭ್ಯರ್ಥಿಯ ಎರಡನೇ ಸುತ್ತಿನಲ್ಲಿ ಹಂಚಿಕೆಯಾಗುವ ಸೀಟಿಗೆ ಶುಲ್ಕವನ್ನು ಪಾವತಿಸಿ (ಪಾವತಿಸಿರದ ಅಭ್ಯರ್ಥಿಗಳು) ನಿಗದಿತ ದಿನಾಂಕದೊಳಗೆ ಕಾಲೇಜಿನಲ್ಲಿ ಕಡ್ಡಾಯವಾಗಿ ಪ್ರವೇಶವನ್ನು ಪಡೆಯತಕ್ಕದ್ದು. ಒಂದು ವೇಳೆ ಎರಡನೇ ಸುತ್ತಿನಲ್ಲಿ ಸೀಟು ಹಂಚಿಕೆಯ ನಂತರ ಹಂಚಿಕೆಯಾದ ಸೀಟಿಗೆ ಪ್ರವೇಶಾತಿಯನ್ನು ಪಡೆಯದಿದ್ದಲ್ಲಿ ಅಂತಹ ಅಭ್ಯರ್ಥಿಯ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲು ಕ್ರಮ ವಹಿಸಲಾಗುವುದು.

1. ಪಿಜಿಸಿಇಟಿ-2020ರಲ್ಲಿ ರ್‍ಯಾಂಕ್ ಪಡೆದು ಇಲ್ಲಿಯವರೆಗೆ ದಾಖಲೆಗಳ ಪರಿಶೀಲನೆಗೆ ಹಾಜರಾಗದೆ ಇರುವ ಅಭ್ಯರ್ಥಿಗಳಿಗೆ ಕೊನೆಯ ಹಾಗು ಅಂತಿಮ ಅವಕಾಶ ನೀಡಿದ್ದು, ಲಭ್ಯವಿರುವ ಸೀಟುಗಳಿಗೆ ಭಾಗವಹಿಸಲು ಇಷ್ಟವಿರುವ ಅರ್ಹ ಅಭ್ಯರ್ಥಿಗಳು ದಿನಾಂಕ 07-01-2021 ರಂದು ಬೆಳಿಗ್ಗೆ 11.00 ರಿಂದ ಮಧ್ಯಾಹ್ನ 1.00 ರ ವರೆಗೆ **ಬೆಂಗಳೂರು ಕೇಂದ್ರದಲ್ಲಿ ಮಾತ್ರ ಎಲ್ಲಾ ಮೂಲ ದಾಖಲಾತಿಗಳೊಂದಿಗೆ** ಹಾಜರಾಗಬಹುದಾಗಿದೆ. (ಪ್ರಾಧಿಕಾರದಿಂದ ನೀಡಿದ ವೆರಿಫಿಕೇಶನ್ ಸ್ಲಿಪ್ ಅನ್ನು ಹೊಂದಿಲ್ಲದವರಿಗೆ ಮಾತ್ರ)
2. ಎರಡನೇ ಹಾಗು ಕೊನೆಯ ಸುತ್ತಿನ ಸೀಟು ಹಂಚಿಕೆಗೆ ಅಭ್ಯರ್ಥಿಗಳು ಇಷ್ಟವಿದ್ದಲ್ಲಿ ಹೊಸದಾಗಿ ಆದ್ಯತೆಗಳನ್ನು ದಾಖಲಿಸಬಹುದಾಗಿರುತ್ತದೆ. ಪ್ರಾಧಿಕಾರದ ವೆಬ್‌ಸೈಟ್‌ನ ನಿಗದಿತ ಲಿಂಕ್ ಆಯ್ಕೆ ಮಾಡಿಕೊಂಡು ಅಭ್ಯರ್ಥಿಗಳು ಅವರುಗಳ ಮಾಹಿತಿಯನ್ನು ದಾಖಲಿಸಿದಲ್ಲಿ ಮೊದಲ ಸುತ್ತಿನಲ್ಲಿ ದಾಖಲಿಸಿದ ಆದ್ಯತೆಗಳನ್ನು ತೋರಿಸಲಾಗುವುದು. ಮೊದಲ ಸುತ್ತಿನಲ್ಲಿ ದಾಖಲಿಸಿದ ಆದ್ಯತೆಗಳು ಎರಡನೇ ಸುತ್ತಿಗೂ ಸಹ ಅನ್ವಯಿಸುತ್ತದೆ. (ಅಂದರೆ ಮೇಲ್ಪಟ್ಟ ಆದ್ಯತೆಗಳು ಮಾತ್ರ) ಮೊದಲ ಸುತ್ತಿಗೂ ಮುಂಚೆ ದಾಖಲಿಸಿದ ಆದ್ಯತೆಗಳನ್ನು ಅಂತಿಮ ಎಂದು ಪರಿಗಣಿಸಲಾಗುವುದು.
3. ಅಭ್ಯರ್ಥಿಗಳು ಮೇಲ್ಪಟ್ಟ ಆದ್ಯತೆಗಳನ್ನು (Higher order Options above the allotted option) ಬದಲಾಯಿಸಬಹುದು ಅಥವಾ ತೆಗೆದುಹಾಕಬಹುದು.
4. ಅಭ್ಯರ್ಥಿಗಳು ಎರಡನೇ ಸುತ್ತಿನಲ್ಲಿ ಭಾಗವಹಿಸಲು ಇಚ್ಛಿಸಿರುತ್ತಾರೆ ಎಂದರೆ ಮೊದಲಸುತ್ತಿನಲ್ಲಿ ಹಂಚಿಕೆಯಾದ ಸೀಟಿಗಿಂತ ಉತ್ತಮವಾದ ಸೀಟನ್ನು ಆಯ್ಕೆ ಮಾಡಿಕೊಳ್ಳಲು ಭಾಗವಹಿಸುತ್ತಾರೆ. ಈ ಸುತ್ತಿನಲ್ಲಿ ಅಭ್ಯರ್ಥಿಗಳಿಗೆ ಯಾವುದೇ ಮೇಲ್ಪಟ್ಟ ಆದ್ಯತೆಗಳ ಸೀಟು (Higher order Options above the allotted option) ದೊರಕದಿದ್ದಲ್ಲಿ ಮೊದಲ ಸುತ್ತಿನಲ್ಲಿ ಯಾವುದಾದರೂ ಸೀಟು ಹಂಚಿಕೆಯಾಗಿದ್ದಲ್ಲಿ ಅದೇ ಸೀಟು ಉಳಿಯುತ್ತದೆ.

**ಗಮನಿಸಿ:** ಈ ಸುತ್ತಿನಲ್ಲಿ ಸೀಟು ಹಂಚಿಕೆಯಾದಲ್ಲಿ ಅಥವಾ ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟು confirm ಆದಲ್ಲಿ ಯಾವುದೇ ಕಾರಣಕ್ಕೂ ಬದಲಾಯಿಸುವುದಕ್ಕೆ ಅಥವಾ ರದ್ದುಪಡಿಸಿಕೊಳ್ಳುವುದಕ್ಕೆ ಅವಕಾಶವಿರುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಇಚ್ಛೆ / ಆಯ್ಕೆಗಳನ್ನು ದಾಖಲಿಸುವ ಮೊದಲು ಪೋಷಕರೊಡನೆ ಚರ್ಚಿಸಿ ಇಚ್ಛೆ / ಆಯ್ಕೆಗಳನ್ನು ದಾಖಲಿಸಲು ಸೂಚಿಸಿದೆ. ಅಭ್ಯರ್ಥಿಗಳು ದಾಖಲಿಸುವ ಇಚ್ಛೆ / ಆಯ್ಕೆಗಳನ್ನು ಮತ್ತು ಮೆರಿಟ್ ಆಧಾರದ ಮೇಲೆ ಸೀಟು ಹಂಚಿಕೆಯನ್ನು ಮಾಡುವುದರಿಂದ ಅಭ್ಯರ್ಥಿಯು ಹಂಚಿಕೆಯಾದ ಸೀಟಿಗೆ ಕಡ್ಡಾಯವಾಗಿ ಕಾಲೇಜಿನಲ್ಲಿ ನಿಗದಿತ ದಿನಾಂಕದೊಳಗೆ ಪ್ರವೇಶ ಪಡೆಯಲು ಸೂಚಿಸಿದೆ.

**ಗಮನಿಸಿ:** ಅಭ್ಯರ್ಥಿ ತಮ್ಮ ರ್‍ಯಾಂಕ್ ಸರದಿಯ ನಂತರ ಉದ್ಭವಿಸುವ ಸೀಟುಗಳನ್ನು ಪಡೆಯಲು ಹಕ್ಕನ್ನು ಚಲಾಯಿಸುವಂತಿಲ್ಲ.

ಸಹಿ/-

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**

18th Cross, Sampige Road, Malleshwaram, Bengaluru – 560 012.

Phone: 080-2356 4583, 2336 1786, Fax: 080-2346 1576

e-mail : keauthority-ka@nic.in Website : http://kea.kar.nic.in